ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

## ಸ್ವರ್ಧಾತ್ಮಕ ಪರೀಕ್ಷಾ ತರಬೇತಿ ಘಟಕ ಉದ್ಘಾಟನಾ ಸಮಾರಂಭ

## ಹಾಗೂ

## ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ

**"ನಿರಂತರ ಪರಿಶ್ರಮವೇ ಯಶಸ್ಸಿನ ದಾರಿ" – ಶ್ರೀ ಬಸವರಾಜು ಐ.ಈ (ಕೆ.ಎ.ಎಸ್)**

27 ಆಗಸ್ಟ್ 2026ರಂದು ಕೊಳ್ಳೇಗಾಲದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ವತಿಯಿಂದ ಸ್ವರ್ಧಾತ್ಮಕ ಪರೀಕ್ಷಾ ತರಬೇತಿ ಘಟಕದ ಉದ್ಘಾಟನಾ ಸಮಾರಂಭ ಹಾಗೂ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆಯನ್ನು ಆಯೋಜಿಸಲಾಗಿತ್ತು.

ಉದ್ಘಾಟನೆಯನ್ನು ಕೊಳ್ಳೇಗಾಲ ತಹಶೀಲ್ದಾರರು ಹಾಗೂ ತಾಲ್ಲೂಕು ದಂಡಾಧಿಕಾರಿಗಳಾದ ಶ್ರೀ ಐ.ಈ.ಬಸವಾಜು ಅವರು ನೆರವೇರಿಸಿದರು. ಪ್ರಸ್ತುತ ವಿದ್ಯಾರ್ಥಿಗಳು ಉನ್ನತ ವ್ಯಾಸಂಗದ ಮೂಲಕ ಸ್ವರ್ಧಾತ್ಮಕ ಪರೀಕ್ಷೆಗಳಿಗೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕು. ನಿರಂತರ ಅಧ್ಯಯನ, ಸಮಯದ ಸದ್ಬಳಕೆ, ಸಾಮಾನ್ಯ ಜ್ಞಾನ, ಪ್ರಚಲಿತ ವಿದ್ಯಾಮಾನಗಳು ಹಾಗು ಸೂಕ್ತ ಮಾರ್ಗದರ್ಶನದಿಂದ ಸ್ವರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಬಹುದು ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ಹುಲ್ಲಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಪಾಲಕರಾದ ಡಾ.ಜಯಕುಮಾರ್ ಅವರು ಮಾತನಾಡಿ ಭಾರತದ ಗ್ರಂಥಾಲಯ ವಿಜ್ಞಾನದ ಪಿತಾಮಹ ಎಂದು ಕರೆಯಲ್ಪಡುವ ಡಾ.ಎಸ್.ಆರ್ ರಂಗನಾಥನ್ ಅವರು ಜನ್ಮದಿನದ ನೆನಪಿಗಾಗಿ ಗ್ರಂಥಪಾಲಕರ ದಿನವನ್ನು ಆಚರಿಸಲಾಗುತ್ತದೆ. ಗ್ರಂಥಾಲಯವು ಜ್ಞಾನದ ಭಂಡಾರವಾಗಿದ್ದು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗು ವ್ಯಕ್ತಿತ್ವ ವಿಕಸನದಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಪಠ್ಯಪುಸ್ತಕಗಳ ಜೊತೆಗೆ ಸ್ವರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಗ್ರಂಥಾಲಯದಲ್ಲಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪ ಅವರು ಮಾತನಾಡಿ ಪುಸ್ತಕಗಳು ಉತ್ತಮ ಸ್ನೇಹಿತರಿದ್ದಂತೆ. ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಜ್ಞಾನವೇ ಸಂಪತ್ತು. ಜ್ಞಾನವನ್ನು ಯಾರು ಕದಿಯಲು ಸಾಧ್ಯವಿಲ್ಲ. ನಾವು ಗಳಿಸುವ ಜ್ಞಾನವು ಸಮಾಜದ ಪ್ರಗತಿಗೆ ಪೂರಕವಾಗಿರಬೇಕು ಎಂದು ತಿಳಿಸಿದರು.

ವೇದಿಕೆಯಲ್ಲಿ ಶ್ರೀಮತಿ ಮಮತ ಎಸ್, ಐಕ್ಯೂಎಸಿ ಸಂಚಾಲಕರು ಮತ್ತು ಶ್ರೀ ಮಹದೇವಸ್ವಾಮಿ ಎಸ್, ಗ್ರಂಥಪಾಲಕರು ಉಪಸ್ಥಿತರಿದ್ದರು.



ಕೊಳ್ಳೇಗಾಲ ತಹಶೀಲ್ದಾರರು ಹಾಗೂ ತಾಲ್ಲೂಕು ದಂಡಾಧಿಕಾರಿಗಳಾದ ಶ್ರೀ ಐ.ಈ.ಬಸವಾಜು ಅವರು ಸ್ವರ್ಧಾತ್ಮಕ ಪರೀಕ್ಷಾ ತರಬೇತಿ ಘಟಕದ ಉದ್ಘಾಟನಾ ಸಮಾರಂಭ ಹಾಗೂ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು. ಚಿತ್ರದಲ್ಲಿ ಶ್ರೀಮತಿ ಮಮತ ಎಸ್, ಐಕ್ಯೂಎಸಿ ಸಂಚಾಲಕರು, ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪನವರು, ಡಾ.ಜಯಕುಮಾರ್, ಗ್ರಂಥಪಾಲಕರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುಲ್ಲಹಳ್ಳಿ ಹಾಗೂ ಶ್ರೀ ಮಹದೇವಸ್ವಾಮಿ ಎಸ್. ಗ್ರಂಥಪಾಲಕರು



ಕೊಳ್ಳೇಗಾಲ ತಹಶೀಲ್ದಾರರು ಹಾಗೂ ತಾಲ್ಲೂಕು ದಂಡಾಧಿಕಾರಿಗಳಾದ ಶ್ರೀ ಐ.ಈ.ಬಸವಾಜು ಅವರು ಉದ್ಘಾಟನಾ ಭಾಷಣ ಮಾಡುತ್ತಿರುವುದು. ಚಿತ್ರದಲ್ಲಿ ಶ್ರೀಮತಿ ಮಮತ ಎಸ್, ಐಕ್ಯೂಎಸಿ ಸಂಚಾಲಕರು, ಪ್ರಾಂಶುಪಾಲರಾದ ಡಾ.ಹೆಚ್ ಎಸ್ ಕೊಂಗಳಪ್ಪನವರು, ಡಾ.ಜಯಕುಮಾರ್, ಗ್ರಂಥಪಾಲಕರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುಲ್ಲಹಳ್ಳಿ ಹಾಗೂ ಶ್ರೀ ಮಹದೇವಸ್ವಾಮಿ ಎಸ್, ಗ್ರಂಥಪಾಲಕರು.



ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು.